(9)

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ರಾಜರಾಜೇಶ್ವರಿ ನಗರ ವಲಯ

ಸಂಖ್ಯೆ:ಕಾ.ಪಾ.ಅ(ವಿ)/ರಾರಾನವ/ಆ.ಮ/ 01 /17–18

ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರ ಕಛೇರಿ,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ರಾಜರಾಜೇಶ್ವರಿ ನಗರ ವಲಯ, ಬೆಂಗಳೂರು
ದಿನಾಂಕ: 06/05/2017

ಆಡಳಿತಾತ್ಮಕ ಮಂಜೂರಾತಿ ಜ್ಞಾಪನ ಪತ್ರ

ಕಾಮಗಾರಿಯ ಹೆಸರು: Providing and fixing of LED Street Light in Ward No 16 in RR Nagar Division

ಅಂದಾಜು ಮೊತ್ತ: 15.00 ಲಕ್ಷಗಳು

ಉಲ್ಲೇಖ: 1)ಸರ್ಕಾರದ ಆದೇಶ ಸಂಖ್ಯೆ: ನಅಇ 463 ಎಸ್ಎಪ್ಸಿ 2016 ಬೆಂಗಳೂರು ದಿ:03/12/2016.
2) ಮುಖ್ಯ ಅಭಿಯಂತರರು, ರಾ.ರಾ ನಗರ ವಲಯ ರವರ ಕಛೇರಿ ಸಂಖ್ಯೆ: 185 /16–17 ದಿ:04/05/2016.

****

ಈ ಮೇಲೆ ವಿವರಿಸಿರುವ ಕಾಮಗಾರಿಯ ಅಂದಾಜು ಮೊತ್ತ ರೂ.15.00 ಲಕ್ಷಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ಕೋರಿ ಪ್ರಸ್ತಾವನೆಯನ್ನು **ಮುಖ್ಯ ಅಭಿಯಂತರರು ರಾಜರಾಜೇಶ್ವರಿ ನಗರ** ವಲಯ ರವರಿಗೆ ಸಲ್ಲಿಸಲಾಗಿರುತ್ತದೆ. ಉಲ್ಲೇಖ(1)ರ ಸರ್ಕಾರಿ ಆದೇಶದಲ್ಲಿ ಕ್ರಿಯಾಯೋಜನೆಯು ಅನುಮೋದನೆಗೊಂಡಿದ್ದು, ಈ ಕಾಮಗಾರಿಯು ಸದರಿ ಕ್ರಿಯಾಯೋಜನೆಯಲ್ಲಿ ಒಳಗೊಂಡಿರುತ್ತದೆ. ಸರ್ಕಾರದ ಆದೇಶಾನುಸಾರ ಈ ಕಾಮಗಾರಿಗೆ 2016–17 ನೇ ಸಾಲಿನ ಪಾಲಿಕೆ ಅನುಮೋದಿತ ಆಯವ್ಯಯದ ಲೆಕ್ಕಶೀರ್ಷಿಕೆ **P3110, 14th Finance Commission Grant Works** ರಡಿಯಲ್ಲಿ **ಜಾಬ್ ಸಂಖ್ಯೆ:016–17–000007** ದೊರಕಿರುತ್ತದೆ.

ಈ ಮೇಲಿನ ಅಂಶಗಳ ಹಿನ್ನಲೆಯಲ್ಲಿ ಈ ಕಾಮಗಾರಿಯ ಅಂದಾಜು ಮೊತ್ತ ರೂ.15.00 ಲಕ್ಷಗಳ ಅಂದಾಜುಪಟ್ಟಿಗೆ ಮುಖ್ಯ ಅಭಿಯಂತರರು (ರಾ.ರಾ.ನ.ವ) ರವರು ಮಾನ್ಯ ಆಯುಕ್ತರುರವರು ನೀಡಿರುವ ಅಧಿಕಾರ ಪ್ರತ್ಯಾಯೋಜನೆಯಂತೆ ಉಲ್ಲೇಖ (2) ರ ಆದೇಶದಲ್ಲಿ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿರುತ್ತಾರೆ.

ಮಾನ್ಯ ಆಯುಕ್ತರು ರವರ ಕಛೇರಿ ಆದೇಶ ಸಂಖ್ಯೆ: ಬಿ12(1) ಪಿ.ಆರ್/394/2016–17 ದಿನಾಂಕ: 05/05/2016 ರಲ್ಲಿ ಕಾರ್ಯಪಾಲಕ ಅಭಿಯಂತರರಿಗೆ ಸಕ್ಷಮ ಪ್ರಾಧಿಕಾರದಿಂದ ಆಡಳಿತಾತ್ಮಕ ಅನುಮೋದನೆಯಾಗಿರುವ ಎಲ್ಲಾ ಮೊತ್ತದ ಅಂದಾಜು ಪಟ್ಟಿಗಳ ಆಡಳಿತಾತ್ಮಕ ಮಂಜೂರಾತಿ ಜ್ಞಾಪನ ಪತ್ರಕ್ಕೆ ಸಹಿ ಮಾಡಲು ನೀಡಿರುವ ಅಧಿಕಾರ ಪ್ರತ್ಯಾಯೋಜನೆಯ ಅನ್ವಯ ಸದ್ಧರಿ ಆಡಳಿತಾತ್ಮಕ ಮಂಜೂರಾತಿ ಆದೇಶ ಪ್ರತಿಗೆ ಸಹಿ ಮಾಡಲಾಗಿದೆ. ಆಡಳಿತಾತ್ಮಕ ಮಂಜೂರಾತಿ ಪುಸ್ತಕದ ಪುಟ ಸಂಖ್ಯೆ 145 , ರ ಕ್ರಮ ಸಂಖ್ಯೆ 01 ರಲ್ಲಿ ಈ ಕೆಳಗಿನ ಷರತ್ತುಗಳಿಗೊಳಪಟ್ಟು ದಾಖಲಿಸಲಾಗಿದೆ.

ಷರತ್ತುಗಳು:

1) ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
2) ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಶನ್ ಕರೆದು ಅನುಮೋದನೆ ಪಡೆಯುವುದು.
3) ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4) ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
5) ವಿನ್ಯಾಸಗಳನ್ನು ಸಂಬಂಧಪಟ್ಟ ಮೇಲಾಧಿಕಾರಿಗಳಿಂದ ಅನುಮೋದಿಸಿಕೊಂಡು ಕಾರ್ಯಗತಗೊಳಿಸುವುದು.

ಕಾರ್ಯಪಾಲಕ ಅಭಿಯಂತರರು (ವಿದ್ಯುತ್),
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ರಾಜರಾಜೇಶ್ವರಿ ನಗರ ವಲಯ.

ಪ್ರತಿಯನ್ನು ಮಾಹಿತಿಗಾಗಿ ಸಲ್ಲಿಸಿದೆ.

1) ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು. ರವರ ಮಾಹಿತಿಗಾಗಿ,
2) ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು. ರವರ ಮಾಹಿತಿಗಾಗಿ,
3) ಮುಖ್ಯ ಅಭಿಯಂತರರು, ರಾಜರಾಜೇಶ್ವರಿ ನಗರ ವಲಯ ಬೃಬೆಂ.ಮ.ಪಾ, ರವರ ಮಾಹಿತಿಗಾಗಿ,
4) ಕಛೇರಿ ಪ್ರತಿ